**Akashvani : Bangalore**
**Regional Bulletin In Kannada**
**08.07.2026 / 18.40 hrs**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

೧. ಎರಡು ಹಾಗೂ ೩ನೇ ಹಂತದ ನಗರಗಳಿಗೂ ಮೂಲಸೌಕರ್ಯ ಒದಗಿಸಲು ಸರ್ಕಾರ ಬದ್ಧ - ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

೨. ಎಸ್‌ಐಆರ್‌ನಲ್ಲಿ ೨೦೦೨ರ ಮಾಹಿತಿ ಇಲ್ಲವಾದರೂ ಗಣತಿ ನಮೂನೆ ಭರ್ತಿ ಮಾಡಿ ನೀಡುವಂತೆ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ಮನವಿ

೩. ಮೇಕೆದಾಟು ಯೋಜನೆ ಸ್ಥಳ ಬದಲಾಯಿಸುವಂತೆ ವನ್ಯಜೀವಿ ತಜ್ಞ ಸಂಜಯ್ ಗುಬ್ಬಿ ಸರ್ಕಾರಕ್ಕೆ ಸಲಹೆ

೪. ಸರ್ಕಾರ ರೈತರ ೫೦ ಸಾವಿರದವರೆಗಿನ ಸಾಲ ಮನ್ನಾ ಮಾಡುವಂತೆ ಬಿಜೆಪಿ ಆಗ್ರಹ

೫. ಬೆಳಗಾವಿ ಸೇರಿದಂತೆ ಘಟ್ಟ ಪ್ರದೇಶಗಳಲ್ಲಿ ಭಾರೀ ಮಳೆ ; ಉತ್ತರಕರ್ನಾಟಕದಲ್ಲಿ ಅಪಾಯದ ಮಟ್ಟ ಮೀರಿದ ನದಿಗಳು

---

ಬೆಂಗಳೂರಿನಾಚೆಗೂ ಬೆಂಗಳೂರಿನಂತಹ ನಗರಗಳನ್ನು ನಿರ್ಮಿಸಲು ಸರ್ಕಾರ ಮುಂದಾಗಿದೆ. ಎರಡೂ ಹಾಗೂ ಮೂರನೇ ಹಂತದ ನಗರಗಳಿಗೆ ಎಲ್ಲಾ ರೀತಿಯ ಮೂಲಸೌಕರ್ಯಗಳನ್ನು ಒದಗಿಸಲು ಸರ್ಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಟಾರ್ಗೆಟ್ ಇಂಡಿಯಾ ಕಾರ್ಯಕ್ರಮದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರಿನ ಮೂಲಸೌಕರ್ಯ ಅಭಿವೃದ್ಧಿಗೆ ೧.೫ಲಕ್ಷ ಕೋಟಿ ವೆಚ್ಚ ಮಾಡಲಾಗುತ್ತಿದೆ ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿ ಪ್ರತಿಭಾನ್ವಿತ ಮಾನವ ಸಂಪನ್ಮೂಲವಿದ್ದು, ಪ್ರತಿವರ್ಷ ೧ ಲಕ್ಷದ ೫೦ ಸಾವಿರದ ಎಂಜಿನಿಯರ್‌ಗಳು ಹೊರ ಬರುತ್ತಿದ್ದಾರೆ. ಹೀಗಾಗಿ ರಾಜ್ಯಕ್ಕೆ ಬಂದಿರುವ ಕಂಪನಿಗಳು ಇಲ್ಲಿನ ಸಾಮರ್ಥ್ಯ ಮತ್ತು ಪ್ರತಿಭೆ ಬಗ್ಗೆ ಅರಿತಿರುವುದಾಗಿ ಹೇಳಿದ್ದಾರೆ.

೨೦೨೯ರ ಒಳಗೆ ೫೦೦ ಹೊಸ ಜಿಸಿಸಿಗಳನ್ನು ಆಕರ್ಷಿಸುವ, ೩ ಲಕ್ಷ ೫ ಸಾವಿರ ಗುಣಮಟ್ಟದ ಉದ್ಯೋಗ ಸೃಷ್ಟಿಸುವ ಹಾಗೂ ೪.೭೬ ಲಕ್ಷ ಕೋಟಿ ಮೊತ್ತದ ಆರ್ಥಿಕ ಉತ್ಪಾದನೆಯ ಗುರಿ ಸಾಧಿಸಲು ಸರ್ಕಾರ ಬದ್ಧವಾಗಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಸಂವಾದದಲ್ಲಿ ಪಾಲ್ಗೊಂಡು ಮಾತನಾಡಿದ ಗೃಹ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ, ಜಿಸಿಸಿಗಳು ಕೇವಲ ಸೇವಾ ವಿತರಣಾ ಕೇಂದ್ರಗಳಷ್ಟೇ ಅಲ್ಲದೆ, ಕೃತಕ ಬುದ್ಧಿಮತ್ತೆ, ಸಂಶೋಧನೆ ಮತ್ತು ಅಭಿವೃದ್ಧಿ ಹಾಗೂ ಉತ್ಪನ್ನ ನಾವೀನ್ಯತೆಯ ಜಾಗತಿಕ ಕೇಂದ್ರಗಳಾಗಿ ಬೆಳೆಯುತ್ತಿವೆ ಎಂದು ಶ್ಲಾಘಿಸಿದ್ದಾರೆ. ಸಭೆಗೂ ಮುನ್ನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಟಾರ್ಗೆಟ್ ಇಂಡಿಯಾದ ಬೆಂಗಳೂರು ಕ್ಯಾಂಪಸ್‌ಗೆ ಭೇಟಿ ನೀಡಿ ಪರಿಶೀಲಿಸಿದರು.

---

ರಾಜ್ಯದಲ್ಲಿ ಮತಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ನಡೆಯುತ್ತಿದ್ದು, ಶೇಕಡಾ ೮೦.೮೫ರಷ್ಟು ಅರ್ಜಿ ವಿತರಣೆ ಆಗಿದೆ ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ಮಾಹಿತಿ ನೀಡಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಎಲ್‌ಒಗಳು ಗುಂಪು ಗುಂಪಾಗಿ ಎಸ್‌ಐಆರ್ ನಡೆಸದಂತೆ ಸೂಚನೆ ನೀಡಿದ್ದಾರೆ. ಈಗಾಗಲೇ ರಾಜ್ಯದಲ್ಲಿ ಶೇಕಡ ೯೨ರಷ್ಟು ಮ್ಯಾಪಿಂಗ್ ಕಾರ್ಯ ಪೂರ್ಣಗೊಂಡಿದೆ ಎಂದು ಮಾಹಿತಿ ನೀಡಿದ್ದಾರೆ.

ಪ್ರತಿಪಕ್ಷಗಳು ಆರೋಪ ಮಾಡಿರುವ ಎಸ್‌ಐಆರ್ ಪ್ರಕ್ರಿಯೆ ಕುರಿತಂತೆ ಆಯಾ ಜಿಲ್ಲಾಧಿಕಾರಿಗಳಿಂದ ವರದಿ ಕೇಳಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಕೆಲವು ವಿಧಾನಸಭಾ ಕ್ಷೇತ್ರಗಳಲ್ಲಿ ಶೇಕಡ ೧೦೦ರಷ್ಟು ಗಣತಿ ನಮೂನೆ ವಿತರಿಸಲಾಗಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ ೨೦೦೨ರ ಮಾಹಿತಿ ಇಲ್ಲವಾದರೂ ಮತದಾರರು ಗಣತಿ ನಮೂನೆಯನ್ನು ಭರ್ತಿ ಮಾಡಿ ಸಹಿ ಹಾಕಿ ಬಿಎಲ್‌ಒಗಳಿಗೆ ನೀಡುವಂತೆ ಚುನಾವಣಾ ಆಯುಕ್ತರು ಜನತೆಯಲ್ಲಿ ಮನವಿ ಮಾಡಿದ್ದಾರೆ.

---

ರಾಜ್ಯದಲ್ಲಿ ಎಸ್‌ಐಆರ್ ಚುನಾವಣಾ ಆಯೋಗದ ನಿಯಮಗಳ ಪ್ರಕಾರವೇ ನಡೆಯುತ್ತಿದ್ದು, ನಿಯಮಗಳು ಉಲ್ಲಂಘನೆಯಾದರೆ ಚುನಾವಣಾ ಆಯೋಗ ಕ್ರಮ ಕೈಗೊಳ್ಳಲಿದೆ ಎಂದು ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ. ತುಮಕೂರಿನಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರತಿಪಕ್ಷಗಳ ಆರೋಪ ಸತ್ಯಕ್ಕೆ ದೂರವಾಗಿದೆ ಎಂದು ತಿಳಿಸಿದ್ದಾರೆ. ಎಸ್‌ಐಆರ್ ನಡೆಸಲು ಚುನಾವಣಾ ಆಯೋಗಕ್ಕೆ ಸರ್ಕಾರ ಸಿಬ್ಬಂದಿ ನೀಡಿದೆಯೇ ಹೊರತು ಸರ್ಕಾರ ಯಾವುದೇ ಸೂಚನೆಗಳನ್ನು ನೀಡಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

---

ಮೇಕೆದಾಟು ಯೋಜನೆ ಸ್ಥಳ ಬದಲಾಯಿಸುವಂತೆ ವನ್ಯಜೀವಿ ತಜ್ಞ ಸಂಜಯ್ ಗುಬ್ಬಿ ಸರ್ಕಾರಕ್ಕೆ ಸಲಹೆ ನೀಡಿದ್ದಾರೆ. ಚಾಮರಾಜನಗರ ಜಿಲ್ಲೆಯ ಹನೂರು ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಸ್ತುತ ಸರ್ಕಾರ ನಿಗದಿಪಡಿಸಿರುವ ಜಾಗದಲ್ಲಿ ಮೇಕೆದಾಟು ಯೋಜನೆ ಜಾರಿಯಾದರೇ ೧೨ ಸಾವಿರ ಎಕರೆಯಷ್ಟು ಕಾಡು ಮುಳುಗಲಿದೆ ಎಂದು ಎಚ್ಚರಿಕೆ ನೀಡಿದ್ದಾರೆ. ೫ ರಿಂದ ೭ ಲಕ್ಷ ಮರಗಳು ನಾಶವಾಗಲಿದ್ದು, ಮೇಕೆದಾಟು ಯೋಜನೆಯನ್ನು ಶಿವನಸಮುದ್ರದಲ್ಲಿ ಮಾಡಿದರೆ ಪರಿಸರ ಉಳಿಯಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಈಗಾಗಲೇ ರಾಮನಗರ, ಮಳವಳ್ಳಿ ಭಾಗದಲ್ಲಿ ಮಾನವ-ವನ್ಯಜೀವಿ ಸಂಘರ್ಷ ಹೆಚ್ಚಿದ್ದು, ಆಣೆಕಟ್ಟು ಕಟ್ಟಿದರೇ ವನ್ಯಜೀವಿ ಮತ್ತು ಮಾನವ ಸಂಘರ್ಷ ಇನ್ನಷ್ಟು ಹೆಚ್ಚಾಗಲಿದೆ. ಪ್ರಾಣಿಗಳ ಆವಾಸ ಸ್ಥಾನ ಬದಲಾಗಿ ಸಮಸ್ಯೆ ಸೃಷ್ಟಿಯಾಗಲಿದೆ ಎಂದು ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ.

---

ರಾಜ್ಯದ ವಿವಿಧ ಭಾಗಗಳಲ್ಲಿ ಮಳೆಯ ಕೊರತೆ ಉಂಟಾಗಿದ್ದು, ರೈತರ ಸಂಕಷ್ಟಕ್ಕೆ ಸ್ಪಂದಿಸಬೇಕಾದ ಮಹತ್ವದ ಜವಾಬ್ದಾರಿ ಸರ್ಕಾರದ ಮೇಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರ ರೈತರ ಕಷ್ಟಕ್ಕೆ ಸ್ಪಂದಿಸುತ್ತಿಲ್ಲ ಎಂದು ದೂರಿದ್ದಾರೆ. ಇನ್ನೊಂದೆಡೆ ಪ್ರತಿಪಕ್ಷ ನಾಯಕ ಆರ್.ಅಶೋಕ ಮಾತನಾಡಿ, ರಾಜ್ಯದಲ್ಲಿ ರೈತರು ಬರ ಮತ್ತು ಪ್ರವಾಹದಿಂದ ಸಂಕಷ್ಟಕ್ಕೆ ಒಳಗಾಗಿದ್ದು, ಎಲ್ಲಾ ರೈತರಿಗೆ ಕನಿಷ್ಠ ೫೦ ಸಾವಿರದವರೆಗಿನ ಸಾಲ ಮನ್ನಾವನ್ನು ತಕ್ಷಣವೇ ಘೋಷಿಸಬೇಕು ಎಂದು ಆಗ್ರಹಿಸಿದ್ದಾರೆ. ಬೆಳೆಹಾನಿ ಸಮೀಕ್ಷೆಯನ್ನು ಸಮಾರೋಪಾದಿಯಲ್ಲಿ ಪೂರ್ಣಗೊಳಿಸುವಂತೆ ಸರ್ಕಾರಕ್ಕೆ ಸಲಹೆ ನೀಡಿದ್ದಾರೆ.

---

ದೇಶದಲ್ಲಿ ಎಲ್ ನಿನೊದ ಸಂಭಾವ್ಯ ಪರಿಣಾಮವನ್ನು ಕೇಂದ್ರ ಸರ್ಕಾರ ಸೂಕ್ಷ್ಮವಾಗಿ ಪರಿಗಣಿಸುತ್ತಿದೆ ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ. ದೇಶದ ಹಲವಾರು ಭಾಗಗಳಲ್ಲಿ ಉತ್ತಮ ಮಳೆಯಾಗಿದ್ದು, ಮಳೆ ಕೊರತೆಯಾಗಿರುವ ಜಿಲ್ಲೆಗಳ ಸಂಖ್ಯೆ ೨೭೨ ರಿಂದ ೧೭೮ಕ್ಕೆ ಇಳಿದಿದೆ. ಕರ್ನಾಟಕ ಸೇರಿದಂತೆ ಹಲವು ರಾಜ್ಯಗಳ ಪರಿಸ್ಥಿತಿಯನ್ನು ಕೇಂದ್ರ ಸರ್ಕಾರ ಅವಲೋಕಿಸುತ್ತಿದೆ ಎಂದು ಹೇಳಿದ್ದಾರೆ. ಪ್ರಮುಖವಾಗಿ ಮಾನ್ಸೂನ್ ವಿಳಂಬವಾಗಿರುವುದರಿಂದ ಸೋಯಾಬೀನ್ ಮತ್ತು ಹತ್ತಿ ಬಿತ್ತನೆಯ ಮೇಲೆ ಪರಿಣಾಮ ಬೀರಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

---

ರಾಜ್ಯದ ವಿವಿಧೆಡೆ ಮಳೆ ಮುಂದುವರೆದಿದೆ. ದಕ್ಷಿಣ ಕನ್ನಡ, ಉತ್ತರಕನ್ನಡ, ಉಡುಪಿ ಜಿಲ್ಲೆಯಲ್ಲಿ ಮಳೆ ಮುಂದುವರೆದಿದ್ದು, ಜಿಲ್ಲಾಡಳಿತ ಇಂದು ರೆಡ್ ಅಲರ್ಟ್ ಘೋಷಿಸಿದೆ. ಕೊಡಗಿನಲ್ಲಿ ಧಾರಾಕಾರ ಮಳೆ ಸುರಿಯುತ್ತಿರುವ ಪರಿಣಾಮ ಭಾಗಮಂಡಲದ ತ್ರಿವೇಣಿ ಸಂಗಮದಲ್ಲಿ ಕಾವೇರಿ ಮೈದುಂಬಿ ಹರಿಯುತ್ತಿದೆ. ಈ ನಡುವೆ ಮಹಾರಾಷ್ಟ್ರದಲ್ಲಿ ಮಳೆಯಾಗುತ್ತಿರುವುದರಿಂದ ಉತ್ತರ ಕರ್ನಾಟಕದ ನದಿಗಳು ತುಂಬಿ ಹರಿಯುತ್ತಿವೆ.

ಬೆಳಗಾವಿ ಜಿಲ್ಲೆಯಲ್ಲಿ ಕಳೆದ ಒಂದು ವಾರದಿಂದ ಉತ್ತಮ ಮಳೆಯಾಗುತ್ತಿದ್ದು, ಮಹಾರಾಷ್ಟ್ರದ ಘಟ್ಟ ಪ್ರದೇಶದಲ್ಲಿ ಭಾರಿ ಮಳೆಯಾಗುತ್ತಿರುವದರಿಂದ ಜಿಲ್ಲೆಯ ಕೃಷ್ಣೆ ಸೇರಿದಂತೆ ಅದರ ಉಪ ನದಿಗಳಾದ ವೇದ್‌ಗಂಗಾ, ದೂಧ್‌ಗಂಗಾ ತುಂಬಿ ಹರಿಯುತ್ತಿವೆ. ಈ ನದಿಗಳಿಗೆ ಅಧಿಕ ಪ್ರಮಾಣದಲ್ಲಿ ನೀರು ಹರಿದು ಬರುತ್ತಿದ್ದು, ಚಿಕ್ಕೋಡಿ ತಾಲೂಕಿನಲ್ಲಿರುವ ಕೆಳ ಹಂತದ ಏಳು ಸೇತುವೆಗಳು ಜಲಾವೃತ್ತಗೊಂಡಿವೆ. ಜಿಲ್ಲೆಯ ಘಟಪ್ರಭಾ ಹಾಗೂ ಇದರ ಉಪ ನದಿಗಳಾದ ಹಿರಣ್ಯಕೇಶಿ ಮತ್ತು ಮಾರ್ಕಂಡೇಯ ನದಿಗಳಲ್ಲಿ ನೀರಿನ ಪ್ರಮಾಣ ಹೆಚ್ಚಾಗುತ್ತಿದ್ದು, ಹಿಡಕಲ್ ಜಲಾಶಯದಲ್ಲಿ ನೀರಿನ ಸಂಗ್ರಹ ಹೆಚ್ಚಾಗುತ್ತಿದೆ.

ಬೆಳಗಾವಿ ಮತ್ತು ಖಾನಾಪೂರ ಪ್ರದೇಶದಲ್ಲಿಯೂ ನಿರಂತರ ಮಳೆಯಾಗುತ್ತಿದ್ದು, ಈ ಭಾಗದ ಮಲಪ್ರಭಾ ನದಿ ತುಂಬಿ ಹರಿಯುತ್ತಿದೆ.

ಈ ಕುರಿತು ಆಕಾಶವಾಣಿಗೆ ಮಾಹಿತಿ ನೀಡಿರುವ ಬೆಳಗಾವಿ ಜಿಲ್ಲಾಧಿಕಾರಿ ಮೊಹಮ್ಮದ ರೋಷನ್, ಜಿಲ್ಲೆಯ ೧೫ ತಾಲೂಕುಗಳ ಪೈಕಿ ಸುಮಾರು ೧೦ ತಾಲೂಕುಗಳಲ್ಲಿ ಎರಡನೂರರಿಂದ ೪೦೦ ಮಿಲಿ ಮೀಟರ್ ಮಳೆಯಾಗಿದೆ.

ವಿವಿಧ ಮೂಲಗಳಿಂದ ಹರಿದುಬರುತ್ತಿರುವ ಒಂದು ಲಕ್ಷ ಕ್ಯೂಸೆಕ್ ನೀರು ವಿವಿಧ ಜಲಾಶಯಗಳಲ್ಲಿ ಸಂಗ್ರಹವಾಗುತ್ತಿದ್ದು, ಪ್ರಸ್ತುತ ಹಿಪ್ಪರಗಿ ಜಲಾಶಯದಲ್ಲಿ ೧.೭ ಟಿಎಂಸಿ ನೀರು ಸಂಗ್ರಹವಾಗಿದೆ ಎಂದು ಮಾಹಿತಿ ನೀಡಿದ್ದಾರೆ.

---

ದೇಶದಲ್ಲೇ ಪಂಚಾಯತ್ ರಾಜ್ ವ್ಯವಸ್ಥೆಗೆ ಕರ್ನಾಟಕ ಮಾದರಿಯಾಗಿದೆ ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

ತುಮಕೂರಿನಲ್ಲಿ ನಡೆದ ಗ್ರಾಮಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಮಪಂಚಾಯಿತಿಗಳು, ಕುಡಿಯುವ ನೀರು, ರಸ್ತೆ ಅಭಿವೃದ್ಧಿ ಮತ್ತು ಹಣಕಾಸು ನಿರ್ವಹಣೆಯ ಜೊತೆಗೆ ಶಾಂತಿಯ ವಾತಾವರಣ ನಿರ್ಮಿಸಲು ಆದ್ಯತೆ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಕಂದಾಯ ಇಲಾಖೆಯ ಒಂದು ಕೋಟಿ ೪೪ ಲಕ್ಷ ಪುಟಗಳ ದಾಖಲಾತಿಗಳನ್ನು ಸ್ಕ್ಯಾನ್ ಮಾಡಿ ಇ-ಖಜಾನೆಯಲ್ಲಿ ಸುರಕ್ಷಿತವಾಗಿ ಸಂಗ್ರಹಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

---

ಸಂಕ್ಷಿಪ್ತಸುದ್ದಿಗಳು

೧. ರಾಜ್ಯದ ವಿವಿಧೆಡೆ ಲೋಕಾಯುಕ್ತ ದಾಳಿ ನಡೆದಿದ್ದು, ರಾಯಚೂರಿನ ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಕಾರ್ಯನಿರ್ವಾಹಕ ಅಭಿಯಂತರ ಬಸನಗೌಡ ನಿವಾಸ, ಕಚೇರಿ ಹಾಗೂ ಅವರ ಕುಟುಂಬ ಸದಸ್ಯರಿಗೆ ಸಂಬಂಧಿಸಿದ ಒಟ್ಟು ಏಳು ಸ್ಥಳಗಳ ಮೇಲೆ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

೨. ಕಳೆದ ಎರಡು ವರ್ಷಗಳ ಅವಧಿಯಲ್ಲಿ ಕೇಂದ್ರ ಸರ್ಕಾರದ ವಿವಿಧ ಯೋಜನೆಗಳಡಿ ಚಿಕ್ಕಬಳ್ಳಾಪುರ ಜಿಲ್ಲೆಗೆ ೭ ಸಾವಿರದ ೪೪೯ ಕೋಟಿ ರೂಪಾಯಿ ಅನುದಾನ ಮಂಜೂರಾಗಿದೆ ಎಂದು ಸಂಸದ ಡಾ.ಕೆ.ಸುಧಾಕರ್ ತಿಳಿಸಿದ್ದಾರೆ.

__________ ಮುಕ್ತಾಯ __________